ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2016-17 ದಿನಾಂಕ: 03 -04-2017

## ಪತ್ರಿಕಾ ಆಮಂತ್ರಣ

# ಪತ್ರಿಕಾ ಪ್ರಕಟಣೆ

# ಹಸಿರು ಕ್ರಾಂತಿ ಹರಿಕಾರ ಡಾ. ಬಾಬು ಜಗಜೀವನರಾಂ ಅವರ 110 ನೇ ಜನ್ಮ ದಿನಾಚರಣೆ

ಬೆಂಗಳೂರು, ಏಪ್ರಿಲ್ 3 (ಕರ್ನಾಟಕ ವಾರ್ತೆ)

ಸಮಾಜ ಕಲ್ಯಾಣ ಇಲಾಖಾವತಿಯಿಂದ ಹಸಿರು ಕ್ರಾಂತಿಯ ಹರಿಕಾರ, ರಾಷ್ಟ್ರನಾಯಕ, ಮಾಜಿ ಉಪ ಪ್ರಧಾನಿ ಡಾ. ಬಾಬು ಜಗಜೀವನರಾಂ ಅವರ 110 ನೇ ಜನ್ಮ ದಿನಾಚರಣೆಯನ್ನು ಏಪ್ರಿಲ್ 5 ರಂದು ಬೆಳಿಗ್ಗೆ 10.00 ಗಂಟೆಗೆ ವಿಧಾನಸೌಧದ ಪಶ್ಚಿಮ ದ್ವಾರ, ಬೆಂಗಳೂರು ಇಲ್ಲಿ ಹಮ್ಮಿಕೊಳ್ಳಲಾಗಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ, ಅವರು ಅಂದು ಡಾ. ಬಾಬು ಜಗಜೀವನ ರಾಂ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಲಿದ್ದಾರೆ. ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವ ಹೆಚ್. ಆಂಜನೇಯ ಸೇರಿದಂತೆ ಹಲವು ಗಣ್ಯರು ಅವರ ಪ್ರತಿಮೆಗೆ ಪುಷ್ಪಾರ್ಚನೆ ಮಾಡುವ ಮೂಲಕ ನಮನ ಸಲ್ಲಿಸಲಿದ್ದಾರೆ.

ವಿಧಾನ ಪರಿಷತ್‌ನ ಸಭಾಪತಿಗಳು, ವಿಧಾನಸಭೆಯ ಅಧ್ಯಕ್ಷರು, ಕೇಂದ್ರ ಸಚಿವರು, ರಾಜ್ಯ ಸಚಿವ ಸಂಪುಟದ ಸದಸ್ಯರು ಉಭಯ ಸದನಗಳ ವಿರೋಧ ಪಕ್ಷದ ನಾಯಕರು, ವಿಧಾನಸಭಾ ಸದಸ್ಯರು, ವಿಧಾನ ಪರಿಷತ್ ಸದಸ್ಯರು, ಸಂಸದರು, ಮಹಾನಗರಪಾಲಿಕೆ ಮಹಾಪೌರರು, ಜನ ಪ್ರತಿನಿಧಿಗಳು, ಗಣ್ಯ ನಾಯಕರು ಹಾಗೂ ಡಾ. ಬಾಬು ಜಗಜೀವನರಾಂ ಅವರ ಅನುಯಾತಿಗಳು ಈ ಕಾರ್ಯಕ್ರಮದಲ್ಲಿ ಉಪಸ್ಥಿತರಿರುವರು.

ಎಸ್‌ಎಂ:ಜೆಡಿ:ಜಿಪಿಆರ್

# <u>ದೂರದರ್ಶನ ವಾಹಿನಿಯಲ್ಲಿ</u>
# <u>ನೆಲದ ಸಿರಿ ಮಾಲಿಕೆಯ ಸಾಕ್ಷ್ಯಚಿತ್ರ</u>

ಬೆಂಗಳೂರು, ಏಪ್ರಿಲ್ 3 (ಕರ್ನಾಟಕ ವಾರ್ತೆ)

**ದೂರದರ್ಶನ ವಾಹಿನಿಯಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವಿವಿಧ ಕ್ಷೇತ್ರಗಳಲ್ಲಿ ಅಪ್ರತಿಮಾ ಸಾಧನೆ ಮಾಡಿರುವ ನಾಡಿನ ಸಾಧಕರ ಕುರಿತು ನಿರ್ಮಿಸಿರುವ ನೆಲದ ಸಿರಿ ಮಾಲಿಕೆಯ ಸಾಕ್ಷ್ಯಚಿತ್ರಗಳ ಪ್ರಸಾರ ಇಂದಿನಿಂದ ಪ್ರತಿದಿನ ಸಂಜೆ 6.00 ಗಂಟೆಯಿಂದ 6.15 ಗಂಟೆ ಅವಧಿಯಲ್ಲಿ ಪ್ರಸಾರಗೊಳ್ಳಲಿದೆ.**

**ಐದು ದಿನಗಳ ಈ ವಿಶೇಷ ಸರಣಿ ಸಾಕ್ಷ್ಯಚಿತ್ರಗಳ ಪ್ರಸಾರದಲ್ಲಿ ದಿನಾಂಕ: 03-04-2017 ರ ಸೋಮವಾರ ಶ್ರೀ ವಿರೇಶ್ವರ ಪುಣ್ಯಾಶ್ರಮ, ದಿನಾಂಕ: 04-04-2017 ರ ಮಂಗಳವಾರ ಶ್ರೀಮತಿ ಲಕ್ಷ್ಮೀ ರಾಮಪ್ಪ, ದಿನಾಂಕ: 05-04-2017 ರ ಬುಧವಾರ ಡಾ. ಕುಸುಮಾ ಭಟ್, ದಿನಾಂಕ: 06-04-2017 ರ ಗುರುವಾರ – ಡಾ. ಬಿ.ಎನ್. ಸುಮಿತ್ರಾ ಬಾಯಿ ಹಾಗೂ ದಿನಾಂಕ: 07-04-2017 ರ ಶುಕ್ರವಾರ ಡಾ. ಇಂದಿರಾ ಹೆಗಡೆ ಮತ್ತು ಶ್ರೀಮತಿ ಜಯಂತಿ ಎಸ್. ಬಂಗೇರ ಕುರಿತ ಸಾಕ್ಷ್ಯಚಿತ್ರಗಳು ಭಿತ್ತರಗೊಳ್ಳಲಿವೆ.**

**ಎಸ್‌ಎಂ:ಜೆಡಿ:ಜಿಪಿಆರ್.**

## ರಾಜ್ಯ ಪರಿಸರ ಪ್ರಶಸ್ತಿಗಾಗಿ ಅರ್ಜಿ/ನಾಮನಿರ್ದೇಶನಕ್ಕಾಗಿ ಆಹ್ವಾನ

ಬೆಂಗಳೂರು, ಏಪ್ರಿಲ್ 3 (ಕರ್ನಾಟಕ ವಾರ್ತೆ)

ಕರ್ನಾಟಕ ಸರ್ಕಾರದ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆಯು **2016-17ನೇ ಸಾಲಿನ ಕರ್ನಾಟಕ ರಾಜ್ಯ ಪರಿಸರ ಪ್ರಶಸ್ತಿಗಳಿಗಾಗಿ** ಅರ್ಜಿಗಳನ್ನು/ನಾಮನಿರ್ದೇಶನಗಳನ್ನು ಆಹ್ವಾನಿಸಿದೆ.

ಪರಿಸರ ಸಂರಕ್ಷಣೆ ಮತ್ತು ಪರಿಸರ ವ್ಯವಸ್ಥಾಪನೆಯ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸಿದ ವ್ಯಕ್ತಿ ಹಾಗೂ ಸಂಸ್ಥೆಗಳಿಗೆ (ಸರ್ಕಾರಿ/ಸರ್ಕಾರೇತರ ಸಂಸ್ಥೆಗಳು/ ಕಂಪನಿಗಳು/ಟ್ರಸ್ಟ್‌ಗಳು) ತಲಾ ಒಂದು ಲಕ್ಷ. ರೂ.ನಗದು ಹಾಗೂ ಪ್ರಶಸ್ತಿ ಪ್ರಮಾಣ ಪತ್ರವನ್ನು ನೀಡಲಾಗುವುದು.

**ಅರ್ಜಿ/ನಾಮನಿರ್ದೇಶನ ಸಲ್ಲಿಸಲು ಕೊನೆಯ <u>ದಿನಾಂಕ:30.04.2017</u>** ಆಗಿರುತ್ತದೆ. ಭರ್ತಿ ಮಾಡಿದ ಅರ್ಜಿಗಳನ್ನು **ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆ,** ಕೊಠಡಿ ಸಂಖ್ಯೆ 704, 7ನೇ ಮಹಡಿ, ಬಹುಮಹಡಿಗಳ ಕಟ್ಟಡ, 4ನೇ ಹಂತ, ಬೆಂಗಳೂರು-560001, ಇಲ್ಲಿ ಸಲ್ಲಿಸುವುದು.

ವಿವರಗಳಿಗಾಗಿ **ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳ ಕಛೇರಿ, ಜಿಲ್ಲಾ ಪಂಚಾಯತ್ ಕಛೇರಿ, ಉಪ ಅರಣ್ಯ ಸಂರಕ್ಷಣಾಧಿಕಾರಿಗಳ ಕಛೇರಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಪ್ರಾದೇಶಿಕ ಕಛೇರಿಗಳು, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ,** ಪರಿಸರ ಭವನ, ನಂ.49, ಚರ್ಚ್ ಸ್ಟ್ರೀಟ್, ಬೆಂಗಳೂರು–560 001, **ಮಹಾನಿರ್ದೇಶಕರು, ಪರಿಸರ ನಿರ್ವಹಣೆ ಮತ್ತು ನೀತಿ ಸಂಶೋದನಾ ಸಂಸ್ಥೆ,** 'ಹಸಿರು ಭವನ', ದೊರೆಸಾನಿಪಾಳ್ಯ ಫಾರೆಸ್ಟ್ ಕ್ಯಾಂಪಸ್ ವಿನಾಯಕನಗರ ಸರ್ಕಲ್ ಜೆ.ಪಿ.ನಗರ 5ನೇ ಫೇಸ್ ಬೆಂಗಳೂರು–560 078, **ಸದಸ್ಯ ಕಾರ್ಯದರ್ಶಿ, ಕರ್ನಾಟಕ ಜೀವ ವೈವಿಧ್ಯ ಮಂಡಳಿ,** ನೆಲಮಹಡಿ, ವನವಿಕಾಸ, 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು–560 003, **ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಕರ್ನಾಟಕ ಸರೋವರ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರ** ಈ ಕಛೇರಿಗಳಲ್ಲಿ ಸಂಪರ್ಕಿಸಬಹುದು ಹಾಗೂ ಈ ಕೆಳಕಂಡ ವೆಬ್‌ಸೈಟ್‌ಗಳಲ್ಲಿ ಸಹ ನೋಡಬಹುದು **www.parisara.kar.nic.in, www.kspcb.gov.in, www.empri.kar.nic.in, www.kbb.kar.nic.in** ಮತ್ತು **www.karunadu.gov.in/lda.** (ವಿ.ಸೂ: **ಪ್ರಶಸ್ತಿಗಾಗಿ ಸಲ್ಲಿಸಿದ ಅರ್ಜಿಗಳನ್ನು ಯಾವುದೇ ಕಾರಣಕ್ಕೂ ಹಿಂತಿರುಗಿಸಲಾಗುವುದಿಲ್ಲ**) **ಎಂದು ಪ್ರಕಟಣೆ ತಿಳಿಸಿದೆ.**

ಎಸ್‌ಎಂ:ಜೆಡಿ:ಜಿಪಿಆರ್.